# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ರಮೇಶ್ ಪಾಟೀಲ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಮಣ್ಣೂರು ಗ್ರಾಮ ಪಂಚಾಯಿತಿ, ಅಫ್ಜಲ್‌ಪುರ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:** ಉಪ ನಿಬಂಧಕರು, ವಿಚಾರಣೆಗಳು–3, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರ ಸಂಖ್ಯೆ:ಅ.ಸ.ಪ.ಸಂ.ಕಂಪ್ಲೇಂಟ್/ಉಪಲೋಕ್/ಜಿಎಲ್‌ಬಿ–1290/2014/ಡಿಆರ್‌ಇ–3 ದಿನಾಂಕ:25–08–2016

**ಪ್ರಸ್ತಾವನೆ:**ಮೇಲೆ ಓದಲಾದ ಉಪ ನಿಬಂಧಕರು, ವಿಚಾರಣೆಗಳು–3, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ:19–08–2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ರಮೇಶ್ ಪಾಟೀಲ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಮಣ್ಣೂರು ಗ್ರಾಮ ಪಂಚಾಯಿತಿ, ಅಫ್ಜಲ್‌ಪುರ ತಾಲ್ಲೂಕು, ಕಲಬುರಗಿ ಜಿಲ್ಲೆ, ಇಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ಕಲಬುರಗಿ ಜಿಲ್ಲಾಧಿಕಾರಿಯವರು ಅಫ್ಜಲ್‌ಪುರ ತಾಲ್ಲೂಕಿನ ಮಣ್ಣೂರು ಗ್ರಾಮದ ಸರ್ವೆ ನಂ:707 ರಲ್ಲಿ 14 ಎಕರೆ 13 ಗುಂಟೆ ಜಾಗವನ್ನು ಪುನರ್ ವಸತಿಗಾಗಿ ವಶಪಡಿಸಿಕೊಂಡಿರುತ್ತಾರೆ. ಶ್ರೀ ಮಲ್ಲಿಕಾರ್ಜುನ ತಂದೆ ಚೆನ್ನಪ್ಪ ಬಾಗೇವಾಡಿ, ಇವರು 40*60 ರ ಸೈಟನ್ನು ಮಂಜೂರು ಮಾಡಲು ಕೋರಿದ್ದು, ಜಿಲ್ಲಾಧಿಕಾರಿಗಳು ಸೂಚಿಸಿದ್ದು, ಆದರೆ ತಹಸಿಲ್ದಾರರು ಯಾವುದೇ ಕ್ರಮ ಕೈಗೊಂಡಿಲ್ಲ. ಅಲ್ಲದೇ 3 ಎಕರೆ ಜಾಗವನ್ನು ವಶಪಡಿಸಿಕೊಂಡ ಉದ್ದೇಶಕ್ಕೆ ಬಳಸಿರುವುದಿಲ್ಲ. ದೂರುದಾರರು ಕಂತಿನಲ್ಲಿ ಹಣ ಪಾವತಿಸಿ ತಮ್ಮ ಜಮೀನನ್ನು ಹಿಂಪಡೆಯಲು ಬಯಸಿರುತ್ತಾರೆ. ಪುನರ್ ವಸತಿಗಾಗಿ ವಶಪಡಿಸಿಕೊಂಡ ಜಾಗದಲ್ಲಿ 8 ರಿಂದ 10 ಶೆಡ್‌ಗಳನ್ನು ನಿರ್ಮಿಸಿದ್ದು ಅವುಗಳನ್ನು ಉಪಯೋಗಿಸುತ್ತಿಲ್ಲ, ಎಂದು ದೂರುದಾರರಾದ ಶ್ರೀ ಮಲ್ಲಿಕಾರ್ಜುನ ತಂದೆ ಚೆನ್ನಪ್ಪ ಬಾಗೇವಾಡಿ, ಚಂದ್ರಶೆಟ್ಟಿ ಬೆಕಿನಾಳ, ನಿವೃತ್ತ ಪೊಲೀಸ್ ಅಧಿಕಾರಿ, ಗಂಗಾ ನಿವಾಸ, ವಿದ್ಯಾಚೇತನಾ ಸ್ಕೂಲ್ ಹತ್ತಿರ, ವಿಜಯನಗರ, ಆಳಂದ್ ಕಾಲೋನಿ, ಕಲಬುರಗಿ, ಇವರು ಸಲ್ಲಿಸಿದ ದೂರಿನಂತೆ ನಡೆಸಿದ ತನಿಖೆ ಅನುಸಾರ

> "ಗ್ರಾಮ ಪಂಚಾಯಿತಿ ಜಾಗದಲ್ಲಿ ಅನುಮತಿ ಇಲ್ಲದೇ 8 ರಿಂದ 10 ಶೆಡ್‌ಗಳನ್ನು ನಿರ್ಮಿಸಿದ್ದು, ಈ ಶೆಡ್‌ಗಳನ್ನು ತೆರವುಗೊಳಿಸಲು ಶ್ರೀ ರಮೇಶ್ ಪಾಟೀಲ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಇವರು ಯಾವುದೇ ಕ್ರಮ ಕೈಗೊಳ್ಳದೆ ಇರುವುದು ತಮ್ಮ ಕರ್ತವ್ಯ ನಿರ್ವಹಿಸುವುದರಲ್ಲಿ ನಿರ್ಲಕ್ಷತನ ತೋರುತ್ತಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ."

ಸದರಿಯವರು ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಎಸಗಿದ್ದಾರೆಂಬುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ತಿಳಿಸುತ್ತಾ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/556/ಗ್ರಾಪಂಕಾ/2016 ಬೆಂಗಳೂರು, ದಿನಾಂಕ: 26–10–2016.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ರಮೇಶ್ ಪಾಟೀಲ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಮಣ್ಣೂರು ಗ್ರಾಮ ಪಂಚಾಯಿತಿ, ಅಫ್ಜಲ್‌ಪುರ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ–8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಉಪ ನಿಬಂಧಕರು, ವಿಚಾರಣೆಗಳು–3, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕಲಬುರಗಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಅಫ್ಜಲ್‌ಪುರ ತಾಲ್ಲೂಕು, ಕಲಬುರಗಿ ಜಿಲ್ಲೆ.
6. ಶ್ರೀ ರಮೇಶ್ ಪಾಟೀಲ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಮಣ್ಣೂರು ಗ್ರಾಮ ಪಂಚಾಯಿತಿ, ಅಫ್ಜಲ್‌ಪುರ ತಾಲ್ಲೂಕು, ಕಲಬುರಗಿ ಜಿಲ್ಲೆ.
7. ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.